# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜಿ.ಹೆಚ್.ಭಜಂತ್ರಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಧಾರವಾಡ ಹಾಗೂ ಶ್ರೀ ಆರ್.ಆರ್.ಪಾಟೀಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಯರಿಕೊಪ್ಪ ಗ್ರಾಮ ಪಂಚಾಯತ್, ಧಾರವಾಡ ತಾಲ್ಲೂಕು ಇವರುಗಳ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BGM /1900/2016/ ARLO1 ದಿನಾಂಕ. 18.11.2017.

2) ಮಾನ್ಯ ಉಪ ಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BGM /1900/2016/ ARLO1 ದಿನಾಂಕ. 14.11.2017.

-----

## ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 18.11.2017 ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ -1ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಶ್ರೀ ಮಲ್ಲಿಕಾರ್ಜುನ ದೇವೇಂದ್ರಪ್ಪ ರೊಟ್ಟಿಗವಾಡ , ಕಣವಿ ಹೊನ್ನಾಪುರ, ಧಾರವಾಡ ಇವರು ಧಾರವಾಡ ತಾಲ್ಲೂಕಿನ ಯರಿಕೊಪ್ಪ ಗ್ರಾಮ ಪಂಚಾಯತಿಯಲ್ಲಿ 2013-14ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಗಳಲ್ಲಿ ಕೂಲಿಕಾರರನ್ನು ಬಳಸಿಕೊಳ್ಳದೆ ನಿಯಮಬಾಹಿರವಾಗಿ ಯಂತ್ರಗಳನ್ನು ಉಪಯೋಗಿಸಿ ಕಾಮಗಾರಿಯನ್ನು ನಿರ್ವಹಿಸಿದ್ದಲ್ಲದೇ ಕೂಲಿಕಾರರ ಹೆಸರಿನಲ್ಲಿ ನಕಲಿ ಜಾಬ್ ಕಾರ್ಡ್‌ಗಳನ್ನು ಸೃಷ್ಟಿಸಿದ್ದಾರೆಂದು, 7ನೇ ತರಗತಿ ಮತ್ತು ಪಿ.ಯು.ಸಿ.ನಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಹೆಸರಿನಲ್ಲಿಯೂ ನಕಲಿ ಜಾಬ್ ಕಾರ್ಡ್ ಸೃಷ್ಟಿಸಿ ಎನ್.ಎಂ.ಆರ್.ನಲ್ಲಿ ದಾಖಲಿಸಿದ್ದಾರೆಂದು, ಒಂದು ಕುಟುಂಬದಲ್ಲಿ ಒಬ್ಬರಿಗಿಂತ ಹೆಚ್ಚಿನ ಸದಸ್ಯರಿಗೆ

ಶೌಚಾಲಯ ಕಟ್ಟಲು ಅನುಮೋದನೆ ನೀಡಿದ್ದಾರೆಂದು, ಇದಕ್ಕೆ ಈ ಕೆಳಕಂಡವರು ಜವಾಬ್ದಾರರಾಗಿದ್ದಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ:-

1. ಶ್ರೀ ಆರ್.ಆರ್.ಪಾಟೀಲ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಯರಿಕೊಪ್ಪ ಗ್ರಾಮ ಪಂಚಾಯತಿ, ಧಾರವಾಡ ತಾಲ್ಲೂಕು.
2. ಶ್ರೀ ಜಿ.ಹೆಚ್.ಭಜಂತ್ರಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಧಾರವಾಡ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಪಡೆಯಲಾಗಿರುವ ಆಕ್ಷೇಪಣೆಯಲ್ಲಿ ಸದರಿಯವರುಗಳು ತಮ್ಮ ವಿರುದ್ಧ ಮಾಡಿರುವ ಆರೋಪಗಳನ್ನು ಅಲ್ಲಗಳೆದಿರುತ್ತಾರೆಂದು, ಆದರೆ ರೈತರ ಜಮೀನುಗಳಲ್ಲಿ ನಿರ್ಮಿಸಿರುವ ಕೃಷ ಹೊಂಡ ಕಾಮಗಾರಿಗೆ ಖರ್ಚಾದ ಮೊತ್ತವನ್ನು ತಿಳಿಸಿದ್ದು, ಆದರೆ ಇದಕ್ಕೆ ಸಂಬಂಧಪಟ್ಟ ಅಳತೆ ಪುಸ್ತಕ, ಬಿಲ್ಲುಗಳನ್ನು ಹಾಜರುಪಡಿಸರುವುದಿಲ್ಲವೆಂದು ಸದರಿಯವರ ವಿರುದ್ಧದ ಆರೋಪಗಳನ್ನು ಕೈ ಬಿಡಲು ಪೂರಕ ದಾಖಲೆಗಳನ್ನು ಸಲ್ಲಿಸಿಲ್ಲವೆಂದು ತಿಳಿಸಿರುತ್ತಾರೆ.

ಅಲ್ಲದೆ ಓಂಬುಡ್ಸಮನ್, ಎಂ.ಜಿ.ಎನ್.ಆರ್.ಇ.ಜಿ.ಎ., ಜಿಲ್ಲಾ ಪಂಚಾಯತ್, ಧಾರವಾಡ ರವರು ಸಲ್ಲಿಸಿರುವ ವರದಿಯಲ್ಲಿ ಯರಿಕೊಪ್ಪ ಬಸ್ ನಿಲ್ದಾಣದ ಕಾಮಗಾರಿಗೆ ಸಂಬಂಧಪಟ್ಟ ಎನ್.ಆರ್.ಆರ್.ನಲ್ಲಿ ತೋರಿಸಿರುವಂತೆ ಯಾವುದೇ ಕೂಲಿ ಕಾರ್ಮಿಕರು ಸ್ಥಳದಲ್ಲಿ ಹಾಜರಿರಲಿಲ್ಲವೆಂದು ಹಾಗೂ ವಿದ್ಯಾರ್ಥಿಗಳನ್ನು ಎನ್.ಆರ್.ಆರ್.ಗಳಲ್ಲಿ ಸೇರಿಸಲಾಗಿದೆಯೆಂದು ವರದಿ ಮಾಡಿರುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-1ರವರು ಸದರಿ ಪ್ರಕರಣಕ್ಕೆ ಸಂಬಂಧಿಸಿದ ದೂರು, ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡುಬರುತ್ತಿಲ್ಲವೆಂದೂ, ಸದರಿಯವರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರಾದ ಶ್ರೀ ಜಿ.ಹೆಚ್.ಭಜಂತ್ರಿ, ಸಹಾಯಕ ಇಂಜಿನಿಯರ್ ಹಾಗೂ ಶ್ರೀ ಆರ್.ಆರ್.ಪಾಟೀಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಯರಿಕೊಪ್ಪ ಗ್ರಾಮ ಪಂಚಾಯತ್, ಧಾರವಾಡ ತಾಲ್ಲೂಕು ರವರುಗಳು 2013-14ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಗಳಲ್ಲಿ ಕೂಲಿಕಾರರನ್ನು ಬಳಸಿಕೊಳ್ಳದೆ ನಿಯಮಬಾಹಿರವಾಗಿ ಯಂತ್ರಗಳನ್ನು ಉಪಯೋಗಿಸಿ ಕಾಮಗಾರಿಯನ್ನು ನಿರ್ವಹಿಸಿದ್ದಲ್ಲದೇ ಕೂಲಿಕಾರರ ಹೆಸರಿನಲ್ಲಿ ನಕಲಿ ಜಾಬ್

ಕಾರ್ಡ್‌ಗಳನ್ನು ಸೃಷ್ಟಿಸಿ ಕರ್ತವ್ಯ ಲೋಪ / ಅವ್ಯವಹಾರ ಎಸಗಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಸದರಿಯವರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವೆಂದು ಕಂಡುಬರುತ್ತದೆ.

ಆದ್ದರಿಂದ, ಶ್ರೀ. ಜಿ.ಹೆಚ್.ಭಜಂತ್ರಿ, ಸಹಾಯಕ ಇಂಜಿನಿಯರ್ ಹಾಗೂ ಶ್ರೀ ಆರ್.ಆರ್.ಪಾಟೀಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಯರಿಕೊಪ್ಪ ಗ್ರಾಮ ಪಂಚಾಯತ್, ಧಾರವಾಡ ತಾಲ್ಲೂಕು ಇವರುಗಳ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ

**ಆದೇಶ ಸಂಖ್ಯೆ : ಗ್ರಾಅಪ 158 ಇಎನ್‌ಕ್ಯೂ 2016 ಬೆಂಗಳೂರು,**
**ದಿನಾಂಕ. 12.09.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ -1 ರವರಿಗೆ ವಹಿಸಿ ಆದೇಶಿಸಿದೆ.

1. ಶ್ರೀ ಆರ್.ಆರ್.ಪಾಟೀಲ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಯರಿಕೊಪ್ಪ ಗ್ರಾಮ ಪಂಚಾಯತಿ, ಧಾರವಾಡ ತಾಲ್ಲೂಕು.
2. ಶ್ರೀ ಜಿ.ಹೆಚ್.ಭಜಂತ್ರಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಧಾರವಾಡ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ) 12/09/2017
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.

4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ.
7. ಸಹಾಯಕ ನಿಬಂಧಕರು ಕಾನೂನು ಅಭಿಪ್ರಾಯ-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸಂಬಂಧಪಟ್ಟ ಆಪಾದಿತ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ ಇವರ ಮುಖಾಂತರ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಬಿ&ಸಿ).
11. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮ ಪಂಚಾಯತ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ.
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.